ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 23ನೇ ಮಾರ್ಚ್, 2020

ಅನುಕಂಪದ ಆಧಾರದ ನೇಮಕಾತಿ

ಶ್ರೀ ಪುಟ್ಟಣ್ಣ (ಶಿಕ್ಷಕರ ಕ್ಷೇತ್ರ) :-

1462 (1687) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತಾಲಯ ಹಾಗೂ ಪದವಿ, ಪದವಿಪೂರ್ವ ಶಿಕ್ಷಣ ಇಲಾಖೆಯಲ್ಲಿ ಅನುಕಂಪದ ಆಧಾರದ ಮೇಲೆ ಉದ್ಯೋಗಕ್ಕಾಗಿ ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಅರ್ಜಿ ಸಲ್ಲಿಸಿ ವರ್ಷಗಳು ಕಳೆದರು ಅನುಕಂಪದ ಆಧಾರದ ಮೇಲೆ ಸದರಿಯವರಿಗೆ ಉದ್ಯೋಗ ನೀಡದೆ ವಿಳಂಬವಾಗಲು ಕಾರಣಗಳೇನು ;

(ಇ) ಅನುಕಂಪದ ಆಧಾರದ ಮೇಲೆ ಉದ್ಯೋಗ ನೀಡಲು ವಿನಾಕಾರಣ ಶಿಕ್ಷಣ ಇಲಾಖೆಯಲ್ಲಿ ತೊಂದರೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಇದುವರೆಗೆ ಅರ್ಜಿ ಸಲ್ಲಿಸಿರುವವರಿಗೆ ಯಾವ ಕಾಲಮಿತಿಯಲ್ಲಿ ಉದ್ಯೋಗ ನೀಡಲಾಗುವುದು ?